ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1751/2022

ಚಾಸಾ:6 ಪ್ರಾಸಾ:4

ದಿನಾಂಕ: 29.10.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ರಿಯಾಜ್ |
| ತಂದೆಯ ಹೆಸರು | : | ಶೇಖ್ ಉಮ್ಮರ್ |
| ವಯಸ್ಸು | : | 49 ವರ್ಷ |
| ಉದ್ಯೋಗ | : | ಚಾಲಕ |
| ವಾಸ ಸ್ಥಳ | : | ಕಂಡ್ಲೂರು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿಯ ಪರಿಚಯವಿದೆ. ಸಾಕ್ಷಿಗೆ ನಿಪಿ-2ರ ಮಹಜರನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಸಾಕ್ಷಿ ನಿಪಿ-8ರಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ. ನಿಪಿ-9 ರಿಂದ 11ರಲ್ಲಿ ವಾಹನವನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 04-04-2022 ರಂದು ಕಂಡ್ಲೂರಿನ ದೂಪದ ಕಟ್ಟೆ ಹತ್ತಿರ ಪೊಲೀಸರು ಪಂಚನಾಮೆಗಾಗಿ ನನ್ನನ್ನು ಮತ್ತು ಚಾಸಾ-7ರವನ್ನು ಕರೆಸಿದ್ದರು ಎಂದರೆ ಸರಿ. ನಿಪಿ-8 ರಲ್ಲಿ ಕಾಣುವ ವಾಹನವನ್ನು ಪೊಲೀಸರು ಅದರಲ್ಲಿ ಇದ್ದ ಚೀಲ ಮತ್ತು ಒಳಗೆ ಇದ್ದ ದನದ ತ್ಯಾಜ್ಯಗಳೊಂದಿಗೆ ವಶಕ್ಕೆ ಪಡೆದರು ಎಂದರೆ ನನಗೆ ಗೊತ್ತಿಲ್ಲ. ಸದ್ರಿ ಚೀಲವನ್ನು ತೆಗೆದು ನಿಪಿ-9

ರಿಂದ 11 ರಲ್ಲಿ ಕಾಣುವ ತ್ಯಾಜ್ಯಗಳು ಅದರಲ್ಲಿ ಕಂಡು ಬಂದಿದ್ದು ನನಗೆ ತೋರಿಸಿ ಸ್ಥಳದಲ್ಲಿ ಅವುಗಳ ಪೋಟೋ ತೆಗೆದು ಅವುಗಳನ್ನು ವಶಕ್ಕೆ ಪಡೆದರು ಎಂದರೆ ಸರಿಯಲ್ಲ. ನಿಪಿ-8 ರಲ್ಲಿ ಕಾಣುವ ಗಾಡಿಯನ್ನು ಸದ್ರಿ ದಿನ ನನ್ನ ಪರಿಚಯಸ್ಥನಾದ ನ್ಯಾಯಾಲಯದ ಮುಂದೆ ಇರುವ ಆರೋಪಿ ತ್ಯಾಜ್ಯ ಸಾಗಿಸುವ ವೇಳೆಯಲ್ಲಿ ಸಿಕ್ಕಿಬಿದ್ದಿರುವುದಾಗಿ ಮಾಹಿತಿ ನೀಡಿ ಪಂಚನಾಮೆಯನ್ನು ಬೆಳಗ್ಗೆ 8 ರಿಂದ 9 ರವರೆಗೆ ಜರುಗಿಸಿ ಪೋಟೋಗಳನ್ನು ತೆಗೆದು ನಿಪಿ-2ಕ್ಕೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನಾನು ಪೊಲೀಸರಿಗೆ ಅದೇ ದಿನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-13 ಎಂದು ಗುರುತಿಸಲಾಯಿತು. ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**